**ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ,**
**ಉಡುಪಿ ಜಿಲ್ಲೆ , ಉಡುಪಿ**

**ಸೆಷನ್ಸ್ ಕೇಸ್ ನಂಃ 15/2020** **ಅ.ಸಾ. 17**

**ಚಾ.ಸಾ.39**

| | | |
|---|---|---|
| ಸಾಕ್ಷಿದಾರರ ಹೆಸರು | - | ಜಗದೀಶ್ ಆರ್. |
| ತಂದೆಯ ಹೆಸರು | - | ಮಾನ್ಯ ನಾಯ್ಕು |
| ವಯಸ್ಸು | - | 30 ವರ್ಷ |
| ಉದ್ಯೋಗ | - | ಪಿಸಿ -90 |
| ವಿಳಾಸ | - | ಮಣಿಪಾಲ ಪೋಲಿಸ್ ಠಾಣೆ |

ದಿನಾಂಕಃ 26-10-2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ**

ದಿನಾಂಕ 22-11-2017 ರಿಂದ 26-07-2024 ರವರೆಗೆ ಮಲ್ಪೆ ಪೋಲಿಸ್ ಠಾಣೆಯಲ್ಲಿ ಪಿ.ಸಿ. ಆಗಿ ಕರ್ತವ್ಯ ನಿರ್ವಹಿಸಿದ್ದೆ. ದಿನಾಂಕ 17-08-2020 ರಂದು ತನಿಖಾಧಿಕಾರಿಯ ಸೂಚನೆ ಮೇರೆಗೆ ಮಣಿಪಾಲದ ಕೆಎಂಸಿ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ವೈದ್ಯಾಧಿಕಾರಿಗಳು ಶವ ಪರೀಕ್ಷಾ ಕಾಲದಲ್ಲಿ ಸಂಗ್ರಹಿಸಿರುವ ವಿಸೇರಾವನ್ನು ಮತ್ತು ಮೃತ ದೇಹದ ಮೇಲಿದ್ದ ಬಟ್ಟೆಗಳನ್ನು ಪಡೆದುಕೊಂಡು ತನಿಖಾಧಿಕಾರಿಯ ಸಮಕ್ಷಮ ಹಾಜರು ಪಡಿಸಿರುತ್ತೇನೆ. ಈ ಬಗ್ಗೆ ತನಿಖಾಧಿಕಾರಿ ತಯಾರಿಸಿದ ಮಹಜರಿಗೆ ಸಹಿ ಮಾಡಿರುತ್ತೇನೆ. ಸದ್ರಿ ಮಹಜರನ್ನು ನಿಪಿ-67 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ-67(ಎ) ಎಂದು ಗುರುತಿಸಲಾಯಿತು. ಸದ್ರಿ ಬಟ್ಟೆಗಳನ್ನು ನೋಡಿದರೆ ಗುರುತಿಸುತ್ತೇನೆ. ಅವುಗಳನ್ನು ಈಗಾಗಲೇ ಮುದ್ದೆಮಾಲು-10 ರಿಂದ 14 ಎಂದು ಗುರುತಿಸಲಾಗಿದೆ.

**ಆರೋಪಿತರ ಪರವಾಗಿ ಪಾಟೀ ಸವಾಲುಃ ವಕೀಲರಿಂದ**

ನಾನು ಆಸ್ಪತ್ರೆಗೆ ಹೋಗಿಲ್ಲ ಮತ್ತು ಯಾವುದೇ ವಸ್ತುಗಳನ್ನು ಸ್ವೀಕರಿಸಿಲ್ಲ ಮತ್ತು ತನಿಖಾಧಿಕಾರಿ ಸಮಕ್ಷಮ ಹಾಜರುಪಡಿಸಿಲ್ಲ ಮತ್ತು ತನಿಖಾಧಿಕಾರಿ ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ</u>** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ.